ಬಹಳ ಹಿಂದುಳಿದ 39 ತಾಲ್ಲೂಕುಗಳಲ್ಲಿ ಕೊರತೆ ಇರುವ ಕಡೆ ತೆರೆಯಲು ಪರಿಶೀಲಿಸಲಾಗುವುದು.

2654 (3424) ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ (ಕುಂದಾಪುರ) :– ಮಾನ್ಯ ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿ ಜಿಲ್ಲೆಯಲ್ಲಿ ಹಂಚಿನ ಉದ್ಯಮ ಸಂಕಷ್ಟದಲ್ಲಿರುವುದು ಮತ್ತು ಹಂಚುಗಳಿಗೆ ಬೇಡಿಕೆ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಲ್ಲಿ ಹಂಚಿನ ಉದ್ಯಮದ ಬದಲಿಗೆ ಉಡುಪಿ ಜಿಲ್ಲೆಯಲ್ಲಿ ಯಾವ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ಯೋಚಿಸುತ್ತಿದೆ;

ಇ) ಯಾವ ಕೈಗಾರಿಕೆಗಳನ್ನು ಸ್ಥಾಪಿಸಲು ಸಮೀಕ್ಷೆ ನಡೆಸಲಾಗಿದೆ ಅವು ಯಾವುವು;

ಈ) ಯಾವಾಗ ಪ್ರಾರಂಭಿಸಲು ಉದ್ದೇಶಿಸಲಾಗಿದೆ;

ಉ) ಕೈಗಾರಿಕೆಗಳನ್ನು ಖಾಸಗಿ ಮತ್ತು ಸರ್ಕಾರ ಜಂಟಿಯಾಗಿ ಪ್ರಾರಂಭಿಸುವುದೇ?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯ ಸಚಿವರು) :

ಅ) – ಬಂದಿದೆ –

ಆ) ಹಂಚಿನ ಉದ್ಯಮಗಳಿಗೆ ಸಾಂಪ್ರದಾಯಿಕ ಹಂಚಿನ ಬದಲು ಡೆಕೋರೇಟೀವ್ ಟೈಲ್ಸ್, ಫ್ಲೋರಿಂಗ್ ಟೈಲ್ಸ್ ಉತ್ಪಾದನೆ ಮಾಡಲು ಸಲಹೆಗಳನ್ನು ನೀಡಲಾಗಿದೆ. ಈಗಾಗಲೇ ಕೆಲವು ಘಟಕಗಳು ಉತ್ಪಾದನೆಗಳನ್ನು ಬದಲಾಯಿಸಿ ಡೆಕೋರೇಟೀವ್ ಟೈಲ್ಸ್, ಫ್ಲೋರಿಂಗ್ ಟೈಲ್ಸ್ ಉತ್ಪಾದನೆ ಮಾಡುತ್ತಿದ್ದಾರೆ. ಬೃಹತ್ ಮತ್ತು ಮಧ್ಯಮ ಕ್ಷೇತ್ರದಲ್ಲಿ ಪ್ರವಾಸ್ಯೋದ್ಯಮ, ತೋಟಗಾರಿಕೆ, ಆಯುರ್ವೇದಿಕ್, ಸಾಫ್ಟ್‌ವೇರ್, ಬಯೋಟೆಕ್ನಾಲಜಿ, ಸಿದ್ಧ ಉಡುಪುಗಳು, ಅಟೋಮೊಬೈಲ್ ಬಿಡಿಭಾಗಗಳ ಜೋಡಣೆ ಮುಂತಾದ ಘಟಕಗಳ ಸ್ಥಾಪನೆಗೆ ವಿಪುಲ ಅವಕಾಶವಿರುತ್ತದೆ. ಕೈಗಾರಿಕೆಗಳನ್ನು ಸರ್ಕಾರ ನೇರವಾಗಿ ಸ್ಥಾಪಿಸುವುದಿಲ್ಲ. ಕೈಗಾರಿಕೆಗಳನ್ನು ಖಾಸಗಿ ವಲಯದಲ್ಲಿ ಸ್ಥಾಪಿಸಲಾಗುತ್ತದೆ. ಹೊಸದಾಗಿ ಸ್ಥಾಪಿಸಲ್ಪಡುವ ಕೈಗಾರಿಕೆಗಳಿಗೆ ಕೈಗಾರಿಕಾ ನೀತಿ 2001–2006 ರಂತೆ ಸರ್ಕಾರದಿಂದ ಉತ್ತೇಜನ ನೀಡಲಾಗುತ್ತದೆ.

ಇ) ಉಡುಪಿ ಜಿಲ್ಲೆಯಲ್ಲಿರುವ ಪೂರಕ ಸೌಲಭ್ಯಗಳು ಮತ್ತು ಸಂಪನ್ಮೂಲಗಳನ್ನು ಆಧರಿಸಿ ಕಿರು ಮತ್ತು ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗೆ ಕೈಗಾರಿಕಾ ಮುನ್ನೋಟ ವರದಿಯನ್ನು ತಯಾರು ಮಾಡಲಾಗಿದೆ. ತಾಲ್ಲೂಕು ಮಟ್ಟದ ಕೈಗಾರಿಕಾ ಪ್ರೇರಣಾ ಶಿಬಿರ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮಗಳನ್ನು ನಡೆಸಲಾಗಿದೆ.

ಈ) ಉದ್ಭವಿಸುವುದಿಲ್ಲ.

ಉ) ಕೈಗಾರಿಕೆಗಳನ್ನು ಸರ್ಕಾರ ನೇರವಾಗಿ ಸ್ಥಾಪಿಸುವುದಿಲ್ಲ. ಕೈಗಾರಿಕೆಗಳನ್ನು ಖಾಸಗಿ ವಲಯದಲ್ಲಿ ಸ್ಥಾಪಿಸಲಾಗಿದೆ. ಇದಕ್ಕೆ ಕೈಗಾರಿಕಾ ನೀತಿ 2001–2006ರಂತೆ ಸರ್ಕಾರದಿಂದ ಉತ್ತೇಜನ ನೀಡಲಾಗುತ್ತದೆ.

2655 (2454) ಶ್ರೀ ಹಾಲಪ್ಪ ಹೆಚ್. (ಹೊಸನಗರ) :– ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯಲ್ಲಿರುವ ಸಹಾಯಕ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು);

ಆ) ಹಾಲಿ ಖಾಲಿ ಇರುವ ಸಹಾಯಕ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು);

ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಾರ್ಯನಿರ್ವಹಣಾಧಿಕಾರಿಗಳಾಗಿ ನಿಯೋಜನೆ ಮೇಲೆ ಸೇವೆ ಸಲ್ಲಿಸುತ್ತಿರುವವರು ಎಷ್ಟು (ವಿವರ ನೀಡುವುದು)?

ಶ್ರೀ ಮೆರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು):

ಅ) ಒಟ್ಟು 465 ಸಹಾಯಕ ನಿರ್ದೇಶಕರ ಹುದ್ದೆಗಳು ಮಂಜೂರು ಆಗಿದೆ. (ವಿವರವನ್ನು ಅನುಬಂಧ–1 ರಲ್ಲಿ ನೀಡಲಾಗಿದೆ)

ಆ) ಒಟ್ಟು 91 ಹುದ್ದೆಗಳು ಖಾಲಿ ಇವೆ. (ತಾಲ್ಲೂಕುವಾರು ವಿವರ ಅನುಬಂಧ – 2 ರಲ್ಲಿ ನೀಡಲಾಗಿದೆ)

ಇ) 25 ಸಹಾಯಕ ನಿರ್ದೇಶಕರು ಕಾರ್ಯ ನಿರ್ವಹಣಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. (ವಿವರ ಅನುಬಂಧ – 3ರಲ್ಲಿ ನೀಡಲಾಗಿದೆ)